(ಈ ಹಂತದಲ್ಲಿ ವಿರೋಧ ಪಕ್ಷದ ನಾಯಕರು ಶ್ರೀ ಜಗದೀಶ್ ಶೆಟ್ಟರ್‌ರವರ ನೇತೃತ್ವದಲ್ಲಿ ಭಾರತೀಯ ಜನತಾ ಪಕ್ಷದ ಸದಸ್ಯರು ಸಭಾತ್ಯಾಗ ಮಾಡಿದರು)

ಶ್ರೀ ಮಲ್ಲಿಕಾರ್ಜುನ ಖರ್ಗೆ : ಜಗದೀಶ್ ಶೆಟ್ಟರ್‌ರವರು ಖಾಯಂ ಆಗಿ ಅಲ್ಲಿಯೇ ಕುಳಿತುಕೊಳ್ಳುವ ವ್ಯವಸ್ಥೆ ಮಾಡಿಕೊಳ್ಳುತ್ತಿದ್ದಾರೆ ಮಾಡಿಕೊಳ್ಳಲಿ. ಬಹಳ ಸಂತೋಷ.

(II) 2004–05ನೇ ಸಾಲಿನ ಲೇಖಾನುದಾನದ ಬೇಡಿಕೆಗಳ ಮಂಡನೆ ಹಾಗು ಮತಕ್ಕೆ ಹಾಕುವುದು.

ಶ್ರೀ ಎಸ್.ಎಂ. ಕೃಷ್ಣ(ಮುಖ್ಯಮಂತ್ರಿ) : ಮಾನ್ಯ ಸಭಾಧ್ಯಕ್ಷರೆ,

"ದಿನಾಂಕ 31.3.2005ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ಬರುವ ಅಭಿಯಾಚನೆಗಳ ಕ್ರಮಾಂಕ 1ರಿಂದ 28 ಇವುಗಳಿಗೆ ಸಂಬಂಧಿಸಿದಂತೆ ಸಂದಾಯವಾಗುವ ವೆಚ್ಚವನ್ನು ಭರಿಸಲು ಸರ್ಕಾರಕ್ಕೆ ರಾಜಸ್ವ ಹಾಗೂ ಬಂಡವಾಳ ಖಾತೆಯಲ್ಲಿ ಮಂಜೂರು ಮಾಡಿದ ಮೊಬಲಗೂ ಸೇರಿದಂತೆ ಬೇಡಿಕೆಗಳ ಪಟ್ಟಿಯಲ್ಲಿ ನಮೂದಿಸಿ ಮೊಬಲಗಿಗೆ ಮೀರದ ಮೊತ್ತದ ಲೇಖಾನುದಾನವನ್ನು ಮಂಜೂರು ಮಾಡಬೇಕೆಂದು ಕೋರುತ್ತೇನೆ."

ಪ್ರಸ್ತಾವ ಮಂಡಿಸಲಾಯಿತು

ಅಧ್ಯಕ್ಷರು : ನಾನು ಈಗ ಲೇಖಾನುದನ್ನದ ಬೇಡಿಕೆಗಳನ್ನು ಸಭೆಯ ಮತಕ್ಕೆ ಹಾಕುತ್ತೇನೆ. ಪ್ರಸ್ತಾವ ಏನೆಂದರೆ,

"ದಿನಾಂಕ 31.3.2005ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ಬರುವ ಅಭಿಯಾಚನೆಗಳ ಕ್ರಮಾಂಕ 1ರಿಂದ 28 ಇವುಗಳಿಗೆ ಸಂಬಂಧಿಸಿದಂತೆ ಸಂದಾಯವಾಗುವ ವೆಚ್ಚವನ್ನು ಭರಿಸಲು ಸರ್ಕಾರಕ್ಕೆ ರಾಜಸ್ವ ಹಾಗೂ ಬಂಡವಾಳ ಖಾತೆಯಲ್ಲಿ ಮಂಜೂರು ಮಾಡಿರುವ ಮೊಬಲಗೂ ಸೇರಿದಂತೆ ಬೇಡಿಕೆಗಳ ಪಟ್ಟಿಯಲ್ಲಿ ನಮೂದಿಸಿದ ಮೊಬಲಗಿಗೆ ಮೀರದ ಮೊತ್ತದ ಲೇಖಾನುದಾನವನ್ನು ಮಂಜೂರು ಮಾಡುವುದು"

ಪ್ರಸ್ತಾವ ಅಂಗೀಕರಿಸಲಾಯಿತು ಮತ್ತು ಬೇಡಿಕೆಗಳನ್ನು ಮಂಜೂರು ಮಾಡಲಾಯಿತು

(iii) **2003–04ನೇ ಸಾಲಿನ ಪೂರಕ ಅಂದಾಜುಗಳ (ಅಂತಿಮ ಕಂತು) ಮೇಲಿನ ಚರ್ಚೆ, ಉತ್ತರ ಹಾಗೂ ಮತಕ್ಕೆ ಹಾಕುವುದು**

ಶ್ರೀ ಪಿ.ಜಿ.ಆರ್. ಸಿಂಧ್ಯಾ : ಸನ್ಮಾನ್ಯ ಅಧ್ಯಕ್ಷರೇ, Appropriation Bill ಇನ್ನೂ ನಮಗೆ ತಲುಪಿಲ್ಲ. It has not been circulated ನಾವು ಯಾವುದಕ್ಕೆ ವೋಟು ಹಾಕುವುದು?

ಅಧ್ಯಕ್ಷರು : ಎರಡು ದಿವಸಗಳ ಹಿಂದೆಯೇ ಅದನ್ನು ಇಂಟ್ರಡ್ಯೂಸ್ ಮಾಡಲಾಗಿದೆ. ಅದನ್ನು ಈಗ ಎಲ್ಲ ಮಾನ್ಯ ಸದಸ್ಯರಿಗೂ ಒದಗಿಸಿಕೊಡಬೇಕಾಗಿರುತ್ತದೆ.

ಶ್ರೀ ಮಲ್ಲಿಕಾರ್ಜುನ ಖರ್ಗೆ : ಸನ್ಮಾನ್ಯ ಅಧ್ಯಕ್ಷರೇ, In the absence of the Chief Minister ನಾನು ಈಗಲೇ 2003–04ನೇ ಸಾಲಿನ ಪೂರಕ ಅಂದಾಜು(ಅಂತಿಮ ಕಂತು)ಗಳನ್ನು ಇಂಟ್ರಡ್ಯೂಸ್ ಮಾಡಿದ್ದೆ. ಈಗ ಅದನ್ನು ಮತಕ್ಕೆ ಹಾಕಬೇಕೆಂದು ಕೇಳಿಕೊಳ್ಳುತ್ತೇನೆ.

ಶ್ರೀ ಎಸ್.ಎಂ. ಕೃಷ್ಣ(ಮುಖ್ಯಮಂತ್ರಿ): ಮಾನ್ಯ ಅಧ್ಯಕ್ಷರೆ,

"ದಿನಾಂಕ 31.3.2004ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ಬರುವ ಅಭಿಯಾಚನೆಗಳ ಕ್ರಮಾಂಕ 1ರಿಂದ 5 ಹಾಗೂ 7ರಿಂದ 29 ಇವುಗಳಿಗೆ ಸಂಬಂಧಿಸಿದಂತೆ ಸಂದಾಯವಾಗುವ ವೆಚ್ಚವನ್ನು ಭರಿಸಲು ಸರ್ಕಾರಕ್ಕೆ ರಾಜಸ್ವ ಹಾಗೂ ಬಂಡವಾಳ ಖಾತೆಯಲ್ಲಿ ಮಂಜೂರು ಮಾಡಿದ ಮೊಬಲಗೂ